ಚುಟುಕು ಸುದ್ದಿ

ಪ್ರಾಥಮಿಕ ಆರೋಗ್ಯ ಕೇಂದ್ರ, ಶಿಶು ಆರೈಕೆ ಕೇಂದ್ರ ಉದ್ಘಾಟನೆ

ಮಂಡ್ಯ : ಮಂಡ್ಯ, ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮಂಡ್ಯ ಹಾಗೂ ಪೋಲೀಸ್ ಇಲಾಖೆ ಮಂಡ್ಯ, ಇವರ ಸಂಯುಕ್ತ ಆಶ್ರಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರ, ಶಿಶು ಆರೈಕೆ ಕೇಂದ್ರವನ್ನು ಪಾರ್ಕಿಂಗ್ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಜಿಲ್ಲಾ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎಂ.ಭೃಂಗೇಶ್ ಉದ್ಘಾಟಿಸಿದರು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಮಂಡ್ಯ ಜಿಲ್ಲೆ, ವಕೀಲರ ಸಂಘ ಮಂಡ್ಯ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಬಹಳ ದಿನಗಳಿಂದ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ನ್ಯಾಯಾಲಯದ ಆವರಣದಲ್ಲಿ ತೆರೆಯುವ ಆಲೋಚನೆಯೊಂದಿಗೆ ಇಂದು ಎಲ್ಲರ ಸಹಕಾರದಿಂದ ಪ್ರಾರಂಭಿಸಲಾಗಿದೆ ಎಂದು ನ್ಯಾಯಾಧೀಶರು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ, ಡಿ.ಹೆಚ್.ಓ ಡಾ.ಮೋಹನ್, ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ರಾಜಮೂರ್ತಿ , ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾ ಧೀಶರುಗಳಾದ ನಿರ್ಮಲ, ಮಂಜುಳಾ ಇಟ್ಟಿ, ಶೀಲಾ, ನ್ಯಾಯಾಧೀಶರಾದ ನಾಗರಾಜು, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರಾದ ಸಂದೀಪ್ ಸಾಲಿಯಾನ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ, ನ್ಯಾಯಾಧೀಶರಾದ ಆನಂದ್, ವಕೀಲರ ಸಂಘದ ಅಧ್ಯಕ್ಷ ರಾಜೇಂದ್ರ ಇತರರು ಇದ್ದರು.

ವಿದ್ಯುತ್ ವ್ಯತ್ಯಯ

ಮಂಡ್ಯ: 66/11ಕೆ.ವಿ. ಮಂಡ್ಯ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತುರ್ತು ಕಾರ್ಯನಿರ್ವಹಣೆ ಹಮ್ಮಿಕೊಂಡಿರುವುದರಿಂದ ಮಾರ್ಚ್ 8 ರಂದು ಬೆಳಿಗ್ಗೆ 09–00 ರಿಂದ ಸಂಜೆ 6–00 ಗಂಟೆಯ ವರೆಗೆ ಈ ಕೆಳಕಂಡ ಪ್ರದೇಶಗಳಲ್ಲಿ ವಿದ್ಯುತ್ ನಿಲುಗಡೆಗೊಳಿಸಲಾಗುವುದು.

ಮಂಡ್ಯ ವಿದ್ಯುತ್ ವಿತರಣಾ ಕೇಂದ್ರ :

ನಗರ ಪ್ರದೇಶ : ಸುಭಾಷ್‌ನಗರ, ಆಶೋಕ ನಗರ, ವಿ.ವಿ. ರೋಡ್, ಹೊಸಹಳ್ಳಿ, ವಿನಾಯಕ ಬಡಾವಣೆ, ನೂರು ಅಡಿ ರೋಡ್, ನೆಹರು ನಗರ, ಹೊಸಹಳ್ಳಿ, ದ್ವಾರಕನಗರ, ಗಾಂಧಿನಗರ, ಓಉಔ'ಖ ಟಚಿಥಿಠಣಣ, , ಶ್ರೀ ರಾಮ ನಗರ, ಕಾವೇರಿ ನಗರ 1 & 2 ನೇ ಹಂತ, ಚಂದ್ರ ದರ್ಶನ, ಚಾಮುಂಡೇಶ್ವರಿ ನಗರ, ಅನ್ನಪೂರ್ಣೇಶ್ವರಿ ನಗರ, ಶಂಕರನಗರ, ಇಂಡುವಾಳು, ಕಿರಗಂದೂರು, ಕಲ್ಲಹಳ್ಳಿ, ಕ್ಯಾತುಂಗೆರೆ ಹಾಗೂ ಸುತ್ತ ಮುತ್ತಲಿನ ಪ್ರದೇಶ ಹಾಗೂ ಗ್ರಾಮಾಂತರ ಪ್ರದೇಶಗಳಾದ ಕಾರಸವಾಡಿ, ಮಂಗಲ, ಹನಿಯಂಬಾಡಿ, ಚೀರನಹಳ್ಳಿ, ಹೆಬ್ಬಕವಾಡಿ, ಕೊತ್ತತ್ತಿ, ಮೊತ್ತಹಳ್ಳಿ, ಬೇವಿನಹಳ್ಳಿ, ಹುಲ್ಲುಕೆರೆ, ಎ. ಹುಲಿಕೆರೆ, ಬಿ.ಹುಲಿಕೆರೆ.

ಮತ್ತು ಐ.ಪಿ ಮಾರ್ಗಗಳು ಹಾಗೂ ಸುತ್ತಮುತ್ತಲಿನ ಗ್ರಾಮಗಳಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು ಸಾರ್ವಜನಿಕರ ಮತ್ತು ಗ್ರಾಹಕರ ಕಂಪನಿಯೊಂದಿಗೆ ಸಹಕರಿಸಬೇಕಿದೆ.

ಶಾಸಕ ಉದಯ್ ಹೇಳಿಕೆ । ಬೆಳತ್ತೂರು ಗ್ರಾಮದಲ್ಲಿ ಸಹಕಾರ ಸಂಘದ ಕಚೇರಿ ಉದ್ಘಾಟನೆ

ಸಹಕಾರ ಸಂಘಗಳು ರೈತ ಬಾಂಧವರ ಜೀವನಾಡಿ

- ರೈತರ ಆರ್ಥಿಕಾಭಿವೃದ್ಧಿಗೆ ಹಲವು ಯೋಜನೆ
- ರೈತರಿಗೆ ಅಗತ್ಯ ಸಲವತ್ತು ಒದಗಿಸಲು ಶ್ರಮಿಸಿ
- ಸ್ತ್ರೀ ಶಕ್ತಿ ಸಂಘಗಳಿಗೂ ಹೆಚ್ಚಿನ ಶಕ್ತಿ

ಸಂ.ಕ. ಸಮಾಚಾರ, ಮದ್ದೂರು

ಸಹಕಾರ ಸಂಘಗಳು ರೈತರ ಜೀವನಾಡಿಯಾಗಿದ್ದು ಸ್ಥಳೀಯ ರೈತರು ಹಲವು ಯೋಜನೆಗಳನ್ನು ಬಳಕೆ ಮಾಡಿಕೊಂಡು ಆರ್ಥಿಕಾಭಿವೃದ್ಧಿ ಹೊಂದುವ ಮೂಲಕ ಸ್ವಾವಲಂಬಿ ಬದುಕನ್ನು ಕಂಡುಕೊಳ್ಳುತ್ತಿರುವುದು ಉತ್ತಮ ಬೆಳವಣಿಗೆಯೆಂದು ಶಾಸಕ ಕೆ.ಎಂ.ಉದಯ ತಿಳಿಸಿದರು.

ಮದ್ದೂರು ತಾಲೂಕಿನ ಕೊಪ್ಪ ಹೋಬಳಿಯ ಬೆಳತ್ತೂರು ಗ್ರಾಮದ ವಿವಿದೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ನೂತನ ಕಚೇರಿ ಕಟ್ಟಡ ಹಾಗೂ ಅಂಗಡಿ ಮಳಿಗೆಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು. ಕೇಂದ್ರ ಮತ್ತು ರಾಜ್ಯ ಸರಕಾರ ರೈತರ ಆರ್ಥಿಕಾಭಿವೃದ್ಧಿಗೆ ಹಲವಾರು ಯೋಜನೆಗಳನ್ನು ಜಾರಿಗೊಳಿಸಿದ್ದು ಸ್ಥಳೀಯ ಆಡಳಿತ ಮಂಡಳಿ ಅರ್ಹ ಫಲಾನುಭವಿಗಳನ್ನು ಗುರುತಿಸಿ ಯೋಜನೆಯ ಸದುಪಯೋಗಕ್ಕೆ ಮುಂದಾಗುವಂತೆ ಸಹಕಾರ ಸಂಘಗಳು ಆರ್ಥಿಕಾಭಿವೃದ್ಧಿ ಹೊಂದಿದರೆ ರೈತರು ಆರ್ಥಿಕವಾಗಿ ಸದೃಢರಾಗುತ್ತಾರೆಂದು ಹೇಳಿದರು. ಶಿಥಿಲ ವ್ಯವಸ್ಥೆಯಲ್ಲಿದ್ದ ಕಟ್ಟಡವನ್ನು ಸುಮಾರು 35 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಿರುವುದು ಉತ್ತಮ ಬೆಳವಣಿಗೆ ಎಂದರು.

ಡಿ.ಸಿ.ಸಿ ಬ್ಯಾಂಕ್ ಅಧ್ಯಕ್ಷ ಜೋಗಿಗೌಡ ಮಾತನಾಡಿ ಸಹಕಾರ ಸಂಘದ ಮೂಲಕ ಈಗಾಗಲೇ ಜಿಲ್ಲೆಯಾದ್ಯಂತ ಕೋಟ್ಯಾಂತರ ರೂ. ಸಾಲಸೌಲಭ್ಯ ವಿತರಿಸಿ ಸಂಘಗಳ ಅಭಿವೃದ್ಧಿ ಜತೆಗೆ ಸ್ತ್ರೀ ಶಕ್ತಿ

ಬೆಳತ್ತೂರು ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿರುವ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ಕಟ್ಟಡವನ್ನು ಶಾಸಕ ಕೆ.ಎಂ.ಉದಯ ಲೋಕಾರ್ಪಣೆಗೊಳಿಸಿದರು.

ಸಂಘಗಳಿಗೂ ಹೆಚ್ಚಿನ ಶಕ್ತಿ ತುಂಬಿರುವುದಾಗಿ ತಿಳಿಸಿದರು.

ಜಿಲ್ಲೆಯಲ್ಲಿ ಬೆಳೆಸಾಲ 35 ಕೋಟಿ, ಮಧ್ಯಮ ಹಾಗೂ ಇತರೆ 750 ಕೋಟಿ, ಸ್ತ್ರೀ ಶಕ್ತಿ ಸಂಘಗಳಿಗೆ 203 ಕೋಟಿ ಮತ್ತು ಆಭರಣ 600 ಕೋಟಿ ರೂ.ವರೆಗೂ ಸಾಲ ವಿತರಿಸಿದ್ದು ಸಾಲ ಪಡೆದ ಸಂಘಗಳು, ಸ್ತ್ರೀ ಶಕ್ತಿ ಗುಂಪುಗಳು ಸಕಾಲದಲ್ಲಿ ಸಾಲ ಮರುಪಾವತಿಸಿ ಸಂಘದ ಅಭಿವೃದ್ಧಿಗೆ ಶ್ರಮಿಸಬೇಕೆಂದರು. ಬೆಳತ್ತೂರು ಸಹಕಾರ ಸಂಘದ ಅಧ್ಯಕ್ಷ ಪಿ.ಸಂದರ್ಶ ಮಾತನಾಡಿ ಕಳೆದ ಇಪ್ಪತ್ತೊಂದು ವರ್ಷಗಳಿಂದಲೂ ಬೆಳತ್ತೂರು ಸಂಘವು ಸಾಲ ಮರುಪಾವತಿಯಲ್ಲಿ ಶೇ. 100ರಷ್ಟು ಪ್ರಗತಿ ಹೊಂದಿರುವ ಹಿನ್ನೆಲೆಯಲ್ಲಿ ಜಿಲ್ಲಾ ಪ್ರಶಸ್ತಿ ಪಡೆದಿರುವುದು ಸಂತಸಕರ ಎಂದರು.

ತಮ್ಮ ಅಧಿಕಾರದ ಅವಧಿಯಲ್ಲಿ ಸ್ಥಳೀಯ ಸದಸ್ಯರು, ಮಾಜಿ ಅಧ್ಯಕ್ಷರು, ಮಾಜಿ ಸದಸ್ಯರು ಮತ್ತು ಸ್ಥಳೀಯ ಮುಖಂಡರನ್ನು ವಿಶ್ವಾಸಕ್ಕೆ ಪಡೆದುಕೊಂಡು ನೂತನ ಕಟ್ಟಡ ನಿರ್ಮಿಸಿ ಸುಸಜ್ಜಿತ ಸಭಾಂಗಣ, ಶೌಚಾಲಯ, ಆಡಳಿತ ಕಚೇರಿ, ಅಂಗಡಿ ಮಳಿಗೆಗಳು, ಇನ್ನಿತರ ಸೌಲಭ್ಯ ಕಲ್ಪಿಸಲಾಗಿದೆ ಎಂದರು. ಸದಸ್ಯರ ಷೇರು, ಆಪತ್ಬಾಂದವ ನಿಧಿ, ಅಲ್ಪಾವಧಿ ಸಾಲ, ಮಧ್ಯಮಾವಧಿ ಸಾಲ, ಸ್ವ ಸಹಾಯ ಸಂಘ ಹಾಗೂ ದುಡಿಯುವ ಬಂಡವಾಳದಲ್ಲಿ ಸಂಘವು ಆರ್ಥಿಕವಾಗಿ ಪ್ರಗತಿ ಹೊಂದಿದ್ದು ಮುಂದಿನ ದಿನಗಳಲ್ಲಿ ಸ್ಥಳೀಯ ರೈತರಿಗೆ ಅನುಕೂಲ ಕಲ್ಪಿಸಬೇಕೆಂಬ ನಿಟ್ಟಿನಲ್ಲಿ ಗ್ರಾಮ–1 ತೆರೆದು ಹಲವು ಸೌಲಭ್ಯ ಕಲ್ಪಿಸಲು ಕ್ರಮ ವಹಿಸಲಾಗಿದೆ ಎಂದರು.

ಮನ್‌ಮುಲ್ ನಿರ್ದೇಶಕ ಹರೀಶ್, ಸಹಕಾರ ಸಂಘದ ಉಪಾಧ್ಯಕ್ಷ ಬಿ.ಎ.ಪಚ್ಚೆ, ಸದಸ್ಯರಾದ ಬಿ.ಎನ್.ಸುಧಾಕರ, ಎಚ್.ಜಿ.ಪ್ರಭುಲಿಂಗ, ಅನಂತರಾಮು, ಕೆಂಪಯ್ಯ, ಬಿ.ಟಿ.ವೆಂಕಟೇಶ್, ಬಿ.ಜೆ.ಮಂಜುನಾಥ್, ವೆಂಕಟರಾಮು, ಪುಟ್ಟಚನ್ನಮ್ಮ, ಗೌರಮ್ಮ, ಎಂ.ಡಿ.ಸಿ.ಸಿ ಬ್ಯಾಂಕ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಸಿ.ವನಜಾಕ್ಷಿ, ಸಹಕಾರ ಸಂಘಗಳ ಉಪನಿಬಂಧಕ ಎಚ್.ಆರ್.ನಾಗಭೂಷಣ್, ಸಹಾಯಕ ನಿಬಂಧಕ ಕೆ.ಅನಿತ, ಸಹಕಾರ ಅಭಿವೃದ್ಧಿ ಅಧಿಕಾರಿ ಪಿ.ಧರಣಿಕುಮಾರ್ ಹಾಗೂ ಸ್ಥಳೀಯ ಮುಖಂಡರು ಹಾಜರಿದ್ದರು.

ಬಿಜಿಎಸ್ ಶಾಲೆಯಲ್ಲಿ ವಿಜ್ಞಾನ ವಸ್ತು ಪ್ರದರ್ಶನ ಉದ್ಘಾಟನೆ

ಕೃಷ್ಣರಾಜಪೇಟೆ: ವಿಜ್ಞಾನ ನಮ್ಮ ವ್ಯಕ್ತಿತ್ವ ಹಾಗೂ ವಿಕಾಸದ ಪ್ರತೀಕವಾಗಿದೆ. ವಿದ್ಯಾರ್ಥಿಗಳು ಹಾಗೂ ಯುವ ಜನರು ವಿಜ್ಞಾನದ ಆವಿಷ್ಕಾರಗಳ ಫಲವನ್ನು ಸುಭದ್ರ ರಾಷ್ಟ್ರ ನಿರ್ಮಾಣಕ್ಕೆ ಬಳಕೆ ಮಾಡಿಕೊಂಡು ಮುಂದೆ ಸಾಗಿ ಸಾಧನೆ ಮಾಡಬೇಕು ಎಂದು ಜಿಲ್ಲಾ ಪಂಚಾಯತ್ ಸ್ಥಾಯಿಸಮಿತಿ ಮಾಜಿ ಅಧ್ಯಕ್ಷ ವಿ. ಮಂಜೇಗೌಡ ಹೇಳಿದರು.

ಪಟ್ಟಣದ ಬಿಜಿಎಸ್ ಶಾಲೆಯಲ್ಲಿ ವಿಜ್ಞಾನ ದಿನದ ಅಂಗವಾಗಿ ಆಯೋಜಿ ಸಿದ್ದ ವಿಜ್ಞಾನ ವಸ್ತು ಪ್ರದರ್ಶನ ಉದ್ಘಾಟಿಸಿ ಮಾತನಾಡಿದರು. ದೇಶದ ಖ್ಯಾತ ವಿಜ್ಞಾನಿಗಳಾದ ಸರ್ ಸಿ.ವಿ.ರಾಮನ್ ಅವರ ಹುಟ್ಟುಹಬ್ಬದ ದಿನವನ್ನು ಭಾರತ ದೇಶದಲ್ಲಿ ರಾಷ್ಟ್ರೀಯ ವಿಜ್ಞಾನ ದಿನವನ್ನಾಗಿ ಆಚರಿಸಲಾಗುತ್ತಿದೆ.

ಯುವ ಜನರು ಹಾಗೂ ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವನೆ ಮೂಡಿಸಲು ವಿಜ್ಞಾನದ ವಿವಿಧ ಮಾದರಿ ಗಳನ್ನು ತಯಾರಿಸಿ ವಸ್ತು ಪ್ರದರ್ಶ ನದಲ್ಲಿರಿಸಿ ಅವುಗ ಳಿಂದ ಆಗುವ ಲಾಭ ಮತ್ತು ಸಂಶೋಧನೆಯಿಂದ ಆಗುವ ಪ್ರಯೋಜನ ಗಳ ಬಗ್ಗೆ ಮಾಹಿತಿ ನೀಡಿ ವೈಜ್ಞಾನಿಕ ಮನೋಭಾವನೆ ಬೆಳೆಸಲು ಇಂತಹ ಕಾರ್ಯಕ್ರಮಗಳು ವರದಾನ ಎಂದರು. ರಾಜ್ಯ ಆರ್.ಟಿ.ಓ ಅಧಿಕಾರಿಗಳ ಸಂಘದ ಅಧ್ಯಕ್ಷ ಮಲ್ಲಿಕಾರ್ಜುನ ಯುಗಯೋಗಿ, ಜಗದ್ಗುರು ಡಾ. ಶ್ರೀಶ್ರೀ ಬಾಲಗಂಗಾಧರನಾಥ ಸ್ವಾಮೀಜಿಗಳ ಪುತ್ಥಳಿಗೆ ವಿಶೇಷ ಪೂಜೆ ಸಲ್ಲಿಸಿದರು. ಹೇಮಗಿರಿ ಶಾಖಾ ಮಠದ ಗೌರವ ಕಾರ್ಯದರ್ಶಿ ಡಾ.ಜೆ.ಎನ್. ರಾಮಕೃಷ್ಣ೗ಡ ಕಾರ್ಯಕ್ರಮದ ನೇತೃತ್ವ ವಹಿಸಿದ್ದರು. ಪತ್ರಕರ್ತರಾದ ಎಂ.ಕೆ. ಹರಿಚರಣತಿಲಕ್, ಕೆ.ಆರ್.ನೀಲಕಂಠ, ಜವರೇಗೌಡ, ಪ್ರಾಂಶುಪಾಲ ಪ್ರಸಾದೇಗೌಡ, ಆನಂದ್, ಪ್ರಥಮ ದರ್ಜೆ ಸಹಾಯಕ ರಾಮಚಂದ್ರ ಇದ್ದರು.

ಕೆಆರ್‌ಪೇಟೆ ಬಿಜಿಎಸ್ ಶಾಲೆಯಲ್ಲಿ ವಿಜ್ಞಾನ ದಿನದ ಅಂಗವಾಗಿ ಆಯೋಜಿಸಿದ್ದ ವಿಜ್ಞಾನ ವಸ್ತು ಪ್ರದರ್ಶನವನ್ನು ಜಿ.ಪಂ ಸ್ಥಾಯಿಸಮಿತಿ ಮಾಜಿ ಅಧ್ಯಕ್ಷ ವಿ.ಮಂಜೇಗೌಡ ಉದ್ಘಾಟಿಸಿದರು.

ಕೇಂಬ್ರಿಡ್ಜ್ ಶಾಲೆಯಲ್ಲಿ ಪ್ರೇರಣಾ ತರಬೇತಿ ಶಿಬಿರ

ಸಂ.ಕ. ಸಮಾಚಾರ, ಕಿಕ್ಕೇರಿ

ಪರೀಕ್ಷೆಯನ್ನು ಹಬ್ಬದಂತೆ ಸಂಭ್ರಮದಿಂದ ಸ್ವೀಕರಿಸಿದರೆ ಯಶಸ್ಸು ಖಚಿತವಾಗಿ ಲಭಿಸಲಿದೆ ಎಂದು ಪಾಂಡವಪುರ ಉಪವಿಭಾಗಾಧಿಕಾರಿ ಶ್ರೀನಿವಾಸ್ ತಿಳಿಸಿದರು.

ಪಟ್ಟಣದ ಕೇಂಬ್ರಿಡ್ಜ್ ಶಾಲೆಯಲ್ಲಿ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಪ್ರೇರಣಾ ತರಬೇತಿ ಶಿಬಿರದಲ್ಲಿ ಮಾತನಾಡಿದರು, ಸಮಯಕ್ಕೆ ಒತ್ತು ನೀಡಿ. ಪರೀಕ್ಷೆ ಭಯ ಕಾಡದಿರಲಿ. ಕಲಿತಷ್ಟು ಬರೆಯುವ ಜಾಣ್ಮೆ ರೂಢಿಸಿಕೊಳ್ಳಿ. ಸಕಾರಾತ್ಮಕ ಚಿಂತನೆ ಇರಲಿ. ಯೋಗ, ಧ್ಯಾನ ಮೈಗೂಡಿಸಿಕೊಳ್ಳಿ ಎಂದರು.

ತಾ. ಕ್ಷೇತ್ರಶಿಕ್ಷಣಾಧಿಕಾರಿ ವೈ.ಕೆ. ತಿಮ್ಮೇಗೌಡ ಮಾತನಾಡಿ, ಹೋಬಳಿಯಲ್ಲಿ ಈ ಬಾರಿ 529ವಿದ್ಯಾರ್ಥಿಗಳು ಸೇರಿದಂತೆ ತಾಲ್ಲೂಕಿನಲ್ಲಿ ಒಟ್ಟು 2695ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಾಗುತ್ತಿದೆ. ವಿದ್ಯಾರ್ಥಿಗಳಿಗೆ ಮನೆಮನೆಗೆ ತೆರಳಿ ಪೋಷಕರು ಮಕ್ಕಳ ಓದಿಗೆ ಕೈಗೊಂಡಿರುವ ಕ್ರಮ ಕುರಿತು ಚರ್ಚೆ, ಸ್ನೇಹಮಯಿ ವಾತಾವರಣ ಮೂಡಿಸಲಾಗಿದೆ. ಎಂದರು.

ಹೋಬಳಿಯ ಕೃಷ್ಣಾಪುರ, ಸಾಸಲು ಮಾದಾಪುರ, ಐಕನಹಳ್ಳಿ, ಆನೆಗೊಳ ಸೇರಿದಂತೆ ಒಟ್ಟು 10ಪ್ರೌಢಶಾಲೆಯ ವಿದ್ಯಾರ್ಥಿಗಳು ಶಿಬಿರದಲ್ಲಿ ಪಾಲ್ಗೊಂಡು ಸಮಸ್ಯೆಗೆ ಪರಿಹಾರ ಕಂಡುಕೊಂಡರು.

ಶಿಕ್ಷಣ ಸಂಯೋಜಕರಾದ ನವೀನ್‌ಕುಮಾರ್, ಹರೀಶ್, ವೀರಭದ್ರಯ್ಯ, ಕೃಷ್ಣನಾಯಕ್, ಕೆಪಿಎಸ್ ಶಾಲಾ ಉಪಪ್ರಾಂಶುಪಾಲ ಚಲುವನಾರಾಯಣಸ್ವಾಮಿ, ಪ್ರೌಢಶಾಲಾ ಸಹಶಿಕ್ಷಕ ಸಂಘದ ತಾ. ಅಧ್ಯಕ್ಷ ಎಸ್.ಎಂ. ಬಸವರಾಜು, ಮುಖ್ಯ ಶಿಕ್ಷಕರಾದ ಮಮತಾ, ದೀಪಾ ಇದ್ದರು.

ಮಂಡ್ಯ ತಾಲೂಕು ಹೊಳಲು ಗ್ರಾಮದಲ್ಲಿ ಗುರುವಾರ ಮುಂಜಾನೆ ಇಬ್ಬನಿ (ಮಂಜು) ಮಳೆಯು ಆವರಿಸಿದಾಗ ಸೂರ್ಯನ ಬಿಂಬವು ಗದ್ದೆಯಲ್ಲಿ ಕಾಣುತ್ತಿರುವ ದೃಶ್ಯ. (ಹೊಳಲುನಿಂದ ಕೆರೆ ಏರಿಯ ಮಾರ್ಗ ಬೀರೇಗೌಡನಹಳ್ಳಿವರೆಗೆ) ಮಂಜು ಆವರಿಸಿಕೊಂಡಿದ್ದು ಸುಂದರವಾಗಿ ಕಾಣುತ್ತಿದೆ.

ಶಿರಡಿ ಬಾಬಾರ ವಿಗ್ರಹ ಪ್ರತಿಷ್ಠಾಪನೆ

ಮಳವಳ್ಳಿ: ಪಟ್ಟಣದ ಶೆಟ್ಟಹಳ್ಳಿ ರಸ್ತೆಯಲ್ಲಿ ನೂತನವಾಗಿ ನಿರ್ಮಾನಗೊಂಡಿರುವ ಸಾಯಿ ಮಂದಿರದಲ್ಲಿ ಶಿರಡಿ ಸಾಯಿ ಬಾಬಾರ ವಿಗ್ರಹ ಪ್ರತಿಷ್ಠಾನ ಮಹೋತ್ಸವವು ಭಕ್ತಿ ಪ್ರಧಾನವಾಗಿ ಜರುಗಿತು.ಶಪಟ್ಟಣದ ಮಹದೇಶ್ವರ ದೇವಾಲಯ ಆವರಣದಲ್ಲಿ ಸಿರಡಿ ಸಾಯಿ ಬಾಬಾರ ವಿಗ್ರಹಕ್ಕೆ ಪೂಜೆ ಸಲ್ಲಿಸಿ ಜಾನಪದ ಕಲಾತಂಡಗಳೊಂದಿಗೆ ಮೆರವಣಿಗೆ ಮೂಲಕ ಶೆಟ್ಟಹಳ್ಳಿ ಶ್ರೀಸಾಯಿ ಮಂದಿರಕ್ಕೆ ಕರೆತರಲಾಯಿತು. ಗುರುವಾರ ಮುಂಜಾನೆಯಿಂದಲೇ ಸಾಯಿ ಮಂದಿರದಲ್ಲಿ ವಿವಿಧ ಹೋಮ ಹವನ ಪೂಜಾ ಕೈಂಕರ್ಯಗಳು ಭಕ್ತಿ ಪ್ರಧಾನವಾಗಿ ಜರುಗಿತು. ಬಿ.ಎಂ ಎಜುಕೇಷನಲ್ ಟ್ರಸ್ಟ್ ಕಾರ್ಯದರ್ಶಿ ಎಂ.ರಾಮಕೃಷ್ಣ ಕುಟುಂಬ ಪೂಜೆಯಲ್ಲಿ ಪಾಲ್ಗೊಂಡು ಧನ್ಯತೆ ಮರೆದರು. ವಿವಿಧ ಗ್ರಾಮಗಳಿಂದ ಸಾವಿರಾರು ಭಕ್ತರಿಗೆ ದೇವಾಲಯಕ್ಕೆ ಆಗಮಿಸಿ ಸಿರಡಿ ಸಾಯಿ ಬಾಬಾರ ದರ್ಶನ ಪಡೆದರು. ಪ್ರಸಾದ ವಿನಿಯೋಗ ನಡೆಯಿತು. ಟ್ರಸ್ಟ್ ಕಾರ್ಯದರ್ಶಿ ಎಂ.ರಾಮಕೃಷ್ಣ ಮಾತನಾಡಿ, ಗ್ರಾಮೀಣ ಪ್ರದೇಶದ ಜನರಿಗೆ ಅಳಿಲು ಸೇವೆ ಮಾಡಬೇಕೆಂಬ ಉದ್ದೇಶದಿಂದ ಅತ್ಯೂನ್ನತ ಶಾಲೆಯನ್ನು ಆರಂಭಿಸಲಾಗುತ್ತಿದೆ, ವಿದ್ಯಾರ್ಥಿಗಳಿಗೆ ವಾಸಕ್ಕಾಗಿ ಮನೆಯನ್ನು ನಿರ್ಮಿಸಿದ್ದು, ಒಟ್ಟಾರೆ ಉತ್ತಮ ಪರಿಸರದೊಂದಿಗೆ ದೇಗುಲ ಹಾಗೂ ಶಿಕ್ಷಣ ಸಂಸ್ಥೆ ನಿರ್ಮಾಣಗೊಂಡಿದೆ ಎಂದರು.

ಕಪೋಲಕಲ್ಪಿತ ಕಥೆ ಕಟ್ಟಿ ಜನರನ್ನು ದಿಕ್ಕು ತಪ್ಪಿಸುವುದು ಖಂಡನೀಯ

ಮಂಡ್ಯ : ಕಲ್ಲಿನ ಲಿಂಗದಲ್ಲಿ ರೇಣುಕಾಚಾರ್ಯರು ಜನಿಸಿ ಜಗದ್ಗುರುವಾದರು ಎಂದು ಪಂಚಪೀಠದ ಗುರುಗಳು ಅನಾದಿಕಾಲದಿಂದಲೂ ಜನರನ್ನು ಕಪೋಲಕಲ್ಪಿತ ಕಥೆಯನ್ನು ಕಟ್ಟಿ ಧಾರ್ಮಿಕವಾಗಿ ದಿಕ್ಕುತಪ್ಪಿಸುತ್ತಿರುವುದು ಖಂಡನೀಯ ಎಂದು ಕಲ್ಯಾಣ ಬಸವೇಶ್ವರ ಮಠದ ಓಂಕಾರೇಶ್ವರ ಸ್ವಾಮೀಜಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪಂಚಪೀಠಗಳ ಮಠಾಧೀಶರು ಲಿಂಗಾಯತ ಧರ್ಮದ ವಿಚಾರ ಮಾತನಾಡುವಾಗ ಪ್ರಜ್ಞಾವಂತರಾಗಿ ಎಚ್ಚರಿಕೆಯಿಂದ ಇರಬೇಕೆಂದರು. ಫೆಬ್ರವರಿ 27ರಂದು ಬೆಂಗಳೂರಿನಲ್ಲಿ ನಡೆದ ಲಿಂಗಾಯತ ಸಮಾವೇಶದಲ್ಲಿ ವಚನದರ್ಶನ ಮಿತ್ರಿ ಸತ್ಯ ಎಂಬ ಗ್ರಂಥ ಬಿಡುಗಡೆ ಸಂದರ್ಭದಲ್ಲಿ, ನಾಡಿನ ಹಿರಿಯ ಹೆಸರಂತ ಸಾಹಿತಿ ನಡೋಜ ಗೋ.ರು. ಚನ್ನಬಸಪ್ಪನವರು ವೀರಶೈವ ಪದ ಬೇಡ ಲಿಂಗಾಯತ ಪದವನ್ನೇ ಬಳಸುವಂತೆ ಸತ್ಯವನ್ನು ಹೇಳಿದ್ದಾರೆ.ಸತ್ಯ ಅರಗಿಸಿಕೊಳ್ಳಲಾಗದ ಪಂಚಪೀಠದ ರಂಭಾಪುರಿ ಕೇದಾರನಾಥ ಶ್ರೀಗಳು ಗೊ. ರು.ಚ ಅವರನ್ನು ಏಕವಚನದಲ್ಲಿ ಅವಹೇಳನಕಾರಿಯಾಗಿ ಮಾತನಾಡಿರುವುದು ಖಂಡನೀಯ ಎಂದರು. ರೇಣುಕಾಚಾರ್ಯರೆಂಬ ಕಾಲ್ಪನಿಕ ವ್ಯಕ್ತಿಯನ್ನ ಇಟ್ಟುಕೊಂಡು ಕಾಗಕ್ಕ ಗುಬ್ಬಕ್ಕನ ಕಥೆಯಂತಿರುವ ಪುರಾಣವನ್ನೇ ಇತಿಹಾಸ ಎಂದು ತಿಳಿದಿರುವ ನಿಮ್ಮ ತಪ್ಪು ಕಲ್ಪನೆಯನ್ನ ಬಿಟ್ಟು ಬಸವದಿ ಶರಣರ ವಚನಗಳನ್ನ ಅಧ್ಯಯನ ಮಾ